ಆ) ವಿಜಯಪುರ ಗ್ರಾಮ, ವಿಜಯಪುರ ಹೋಬಳಿ, ದೇವನಹಳ್ಳಿ ತಾಲ್ಲೂಕು.

ಇ) ರೂ.5.00 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ ಕಾಮಗಾರಿಯನ್ನು ಸಧ್ಯದಲ್ಲೆ ಪ್ರಾರಂಭ ಮಾಡಲು ಕ್ರಮ ಕೈಗೊಳ್ಳಲಾಗುವುದು.

**ಸಾರಿಗೆ ಘಟಕದ ಸ್ಥಾಪನೆ**

**480 (377) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) :** ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕಿನಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಘಟಕ ಸ್ಥಾಪನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದರೆ, ಕಾಮಗಾರಿಯನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು; ಇದರ ಅಂದಾಜು ಅನುದಾನದ ಮೊತ್ತ ಎಷ್ಟು?

**ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) :**

ಅ) ಹೌದು.

ಆ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವತಿಯಿಂದ ಘಟಕ ನಿರ್ಮಿಸಲು ನಿವೇಶನವನ್ನು ಗುರುತಿಸಿದ್ದು, ಕಂದಾಯ ಇಲಾಖಾ ವತಿಯಿಂದ ಹಸ್ತಾಂತರಿಸಿದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು. ಸದರಿ ಯೋಜನೆಗೆ ಆಯವ್ಯಯದಲ್ಲಿ 300.00 ಲಕ್ಷ ರೂ.ಗಳನ್ನು ಅಳವಡಿಸಲಾಗಿದೆ.